**Bangalore**
**Regional News**
**02.04.2026: 14.30hrs**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು:

1. ರಾಜ್ಯದಲ್ಲಿ ಸೈಬರ್ ಅಪರಾಧಗಳನ್ನು ನಿಗ್ರಹಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
2. ವಿಧಾನಸಭಾ ಉಪಚುನಾವಣೆ; ದಾವಣಗೆರೆಯಲ್ಲಿ ಅಭ್ಯರ್ಥಿಗಳ ಪರ ರಾಜಕೀಯ ಮುಖಂಡರಿಂದ ಬಿರುಸಿನ ಪ್ರಚಾರ
3. ಅಡಿಕೆಗೆ ನಿಗದಿಪಡಿಸಿರುವ ತೇವಾಂಶ ಮಿತಿ ಸಡಿಲಿಸುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮನವಿ
4. ಮೀನುಗಾರಿಕಾ ಬೋಟ್‌ಗಳಿಗೆ ಡೀಸಲ್ ಮತ್ತು ಗ್ಯಾಸ್ ಸಿಲಿಂಡರ್ ನಿರಂತರವಾಗಿ ಪೂರೈಸುವಂತೆ ಅಧಿಕಾರಿಗಳಿಗೆ ಯು.ಟಿ. ಖಾದರ್ ನಿರ್ದೇಶನ

************

ಸೈಬರ್ ಅಪರಾಧಗಳು ಸೇರಿದಂತೆ ವಿವಿಧ ಅಪರಾಧಗಳು ಕರ್ನಾಟಕದಲ್ಲಿ ರಾಷ್ಟ್ರೀಯ ಸರಾಸರಿಗಿಂತ ಹೆಚ್ಚಾಗಿದ್ದು, ಇದನ್ನು ಕಟ್ಟುನಿಟ್ಟಾಗಿ ತಡೆಗಟ್ಟುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನ ಕೋರಮಂಗಲದ ಪರೇಡ್ ಮೈದಾನದಲ್ಲಿ ಆಯೋಜಿಸಿದ್ದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಪದಕ ಪ್ರದಾನ ಮಾಡಿ, ಮಾತನಾಡಿದ ಅವರು, ಸರ್ಕಾರ ಮಹಿಳೆಯರು, ಮಕ್ಕಳು ಮತ್ತು ಅಸಹಾಯಕರ ರಕ್ಷಣೆಗೆ ಮೊದಲ ಆದ್ಯತೆ ನೀಡುತ್ತಿದೆ. ಪೊಲೀಸರು ಇದನ್ನು ಗಮನದಲ್ಲಿಟ್ಟುಕೊಂಡು ಕಾರ್ಯ ನಿರ್ವಹಿಸುವಂತೆ ಕರೆ ನೀಡಿದ್ದಾರೆ.

****ಧ್ವನಿ***** ಮುಖ್ಯಮಂತ್ರಿ

ಮಂಡ್ಯ ನಗರದ ಪೊಲೀಸ್ ಇಲಾಖೆ ವತಿಯಿಂದ ಡಿ.ಎ.ಆರ್ ಜಿಲ್ಲಾ ಪೊಲೀಸ್ ಕಾವಾಯತು ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆ ನಡೆಯಿತು. ಜಿಲ್ಲಾ ಪೊಲೀಸ್ ಅಧೀಕ್ಷಕಿ ಡಾ. ಶೋಭಾ ರಾಣಿ ಮಾತನಾಡಿ, ಪೊಲೀಸ್ ಅಧಿಕಾರಿಗಳ ಸೇವೆಯನ್ನು ಸ್ಮರಿಸಿ ಈ ದಿನವನ್ನು ಗೌರವಿಸಲಾಗುತ್ತದೆ ಎಂದು ತಿಳಿಸಿದರು. ಚಿಕ್ಕಮಗಳೂರು ನಗರದ ರಾಮನಹಳ್ಳಿಯ ಜಿಲ್ಲಾ

ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಎಂ.ಎಂ ನಾಗರಾಜ್, ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ದಯಾಮ ಸೇರಿದಂತೆ ಆನೇಕ ಗಣ್ಯರು ಭಾಗವಹಿಸಿದ್ದರು. ವಿಜಯಪುರದಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ ಪೊಲೀಸ್ ಕಲ್ಯಾಣ ಹಾಗೂ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಆನಂದ ಕೆ, ಸದಾ ಸಮಾಜದ ಒಳಿತಿಗಾಗಿ ಹಗಲಿರುಳು ಶ್ರಮಿಸುವ ಪೊಲೀಸರು ಕಾರ್ಯ ಜನಮೆಚ್ಚುಗೆಗೆ ಪಾತ್ರವಾಗಿದೆ ಎಂದು ಹೇಳಿದರು. ಸಾರ್ವಜನಿಕರು ತಮ್ಮ ಅಹವಾಲುಗಳನ್ನು ತೆಗೆದುಕೊಂಡು ಪೊಲೀಸ್ ಕಚೇರಿಗೆ ಬಂದಾಗ ಅವರ ಸಮಸ್ಯೆಗಳಿಗೆ ತಾಳ್ಮೆಯಿಂದ ವಿಚಾರಿಸಿ ಸ್ಪಂದಿಸಬೇಕು ಎಂದು  ನಿವೃತ್ತ ಪೊಲೀಸ್ ಸಬ್ ಇನ್ಸಪೆಕ್ಟರ್ ಎಂ.ಐ.ಪಠಾಣ ತಿಳಿಸಿದ್ದಾರೆ.  ಹುಬ್ಬಳ್ಳಿಯ  ಕಾರವಾರ ರಸ್ತೆಯ ಹಳೆಯ ಸಶಸ್ತ್ರ ಮೀಸಲು ಪಡೆಯ ಕವಾಯತು ಮೈದಾನದಲ್ಲಿ ಆಯೋಜಿಸಿದ್ದ ಪೊಲೀಸ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.  ಬಳ್ಳಾರಿ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಮೈದಾನದಲ್ಲಿ ಇಂದು ಪೊಲೀಸ್ ಧ್ವಜ ದಿನಾಚರಣೆ ನಡೆಯಿತು. ಗ್ರಾಮೀಣ ಠಾಣೆಯ ನಿವೃತ್ತ ಎಎಸ್ಐ ಶ್ರೀನಿವಾಸುಲು ಎಂ. ಮುಖ್ಯ ಅತಿಥಿಗಳಾಗಿ ಆರು ತುಕಡಿಗಳಿಂದ ಪಥ ಸಂಚಲನೆಯ ವಂದನೆ ಸ್ವೀಕರಿಸಿದರು.

************

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣಾ ಕಣದಲ್ಲಿ ಅಭ್ಯರ್ಥಿಗಳ ಪರ ವಿವಿಧ ರಾಜಕೀಯ ಪಕ್ಷಗಳ ಬಹಿರಂಗ ಪ್ರಚಾರ ಕಾರ್ಯ ಚುರುಕು ಪಡೆದಿದೆ.  ಬಿಜೆಪಿ  ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಕ್ಷೇತ್ರದ ವಿವಿಧ ಕಡೆಗಳಲ್ಲಿ ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ, ಡಾ.ಜಿಎಂ.ಸಿದ್ದೇಶ್ವರ್, ಬಿ.ಶ್ರೀರಾಮುಲು, ಎಂ.ಪಿ.ರೇಣುಕಾಚಾರ್ಯ, ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಸೇರಿದಂತೆ ಹಲವರು ಪ್ರಚಾರ ನಡೆಸಿದರು.ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಮಲ್ಲಿಕಾರ್ಜುನ್ ಪರವಾಗಿ ಸತತ ಎರಡನೇ ದಿನವಾದ ಇಂದೂ ಕೂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಬಹಿರಂಗ ಪ್ರಚಾರ ನಡೆಸಿದರು. ಮಾಜಿ ಸಭಾಪತಿ ಬಿ.ಎಲ್.ಶಂಕರ್, ರಾಜ್ಯ ಸಭಾ ಸದಸ್ಯ ಎಲ್.ಹನುಮಂತಯ್ಯ ಸೇರಿದಂತೆ ಪಕ್ಷದ ಅನೇಕ ಮುಖಂಡರು ಮತಯಾಚಿಸಿದರು.

************

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಹಿನ್ನೆಲೆಯಲ್ಲಿ ೮೫ ವರ್ಷಕ್ಕಿಂತ ಮೇಲ್ಪಟ್ಟ ಹಿರಿಯರು ಹಾಗೂ ವಿಶೇಷ ಚೇತನರಿಗೆ ನಿನ್ನೆ ನಡೆದ ಮನೆಯಿಂದಲೇ ಮತದಾನದಲ್ಲಿ ಮೊದಲ ದಿನವೇ ಶೇಕಡ ೯೩.೪ ರಷ್ಟು ಮತದಾನವಾಗಿದೆ ಎಂದು ಚುನಾವಣಾಧಿಕಾರಿ ಸಂತೋಷ ಜಗಲಾಸರ

ತಿಳಿಸಿದ್ದಾರೆ.   ೮೫ ವರ್ಷ ಮೇಲ್ಪಟ್ಟ ೧೮೩ ಹಿರಿಯರು ಹಾಗೂ ೯೦ ವಿಶೇಷ ಚೇತನರು ಸೇರಿ ಒಟ್ಟು ೨೭೩ ಜನ ಮನೆಯಿಂದಲೇ ಮತದಾನಕ್ಕೆ ನೋಂದಾಯಿಸಿಕೊಂಡಿದ್ದರು. ಈ ಪೈಕಿ ೮೫ ವರ್ಷ ಮೇಲ್ಪಟ್ಟವರು ೧೬೮, ವಿಶೇಷ ಚೇತನರು ೮೭ ಸೇರಿ ಒಟ್ಟು ೨೫೫ ಜನ ಮನೆಯಿಂದಲೇ ಮತದಾನ ಮಾಡುವ ಮೂಲಕ ಶೇಕಡ ೯೩.೪ ರಷ್ಟು ಮತದಾನವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

************

ಭಾರತೀಯ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಪ್ರಾಧಿಕಾರ ಅಡಿಕೆಗೆ ನಿಗದಿಪಡಿಸಿರುವ ತೇವಾಂಶ ಮಿತಿಯನ್ನು ಸಡಿಲಿಸುವಂತೆ ಕೋರಿ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ಅವರನ್ನು ನವದೆಹಲಿಯಲ್ಲಿ ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ. ರಾಜ್ಯದ ಅಡಿಕೆ ಬೆಳಗಾರರರಿಗೆ ಆಹಾರ ಸುರಕ್ಷತಾ ಪ್ರಾಧಿಕಾರದ ಈ ರೀತಿಯ ತೇವಾಂಶ ಮಿತಿ ಹೇರಿಕೆಯು ಸಾಕಷ್ಟು ತೊಂದರೆಯುಂಟು ಮಾಡುತ್ತಿದೆ. ಆಹಾರ ಸುರಕ್ಷತಾ ಮಾನದಂಡದಡಿಯಲ್ಲಿ ಅಡಿಕೆಯಲ್ಲಿರಬೇಕಾದ ಗರಿಷ್ಠ ತೇವಾಂಶದ ಪ್ರಮಾಣವನ್ನು ಶೇಕಡ ೭ಕ್ಕೆ ನಿಗದಿಪಡಿಸಿರುವುದು ಅಡಿಕೆ ಬೆಳೆಗಾರರನ್ನು ಅಡಕತ್ತರಿಯಲ್ಲಿ ಸಿಲುಕಿಸುವಂತೆ ಮಾಡಿದೆ. ಕರಾವಳಿಯಂತಹ ಅತಿ ಹೆಚ್ಚು ಆರ್ದ್ರತೆ ಇರುವ ಪ್ರದೇಶಗಳಲ್ಲಿ ಅಡಿಕೆಯನ್ನು ಪ್ರಮುಖವಾಗಿ ಬಿಸಿಲಿನಲ್ಲಿ ಒಣಗಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ತೇವಾಂಶ ಮಿತಿಯನ್ನು ಸಡಿಲಿಸಬೇಕು ಎಂದು ಅವರು ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.

************

ಮಂಗಳೂರು ಮೀನುಗಾರಿಕಾ ಬಂದರಿನಿಂದ ಹೊರಡುವ ಬೋಟ್‌ಗಳಿಗೆ ಡೀಸೆಲ್ ಮತ್ತು ಗ್ಯಾಸ್ ಸಿಲಿಂಡರ್‌ಗಳನ್ನು ನಿರಂತರವಾಗಿ ಒದಗಿಸಲು ಸಭಾಧ್ಯಕ್ಷ ಯು.ಟಿ ಖಾದರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮೀನುಗಾರಿಕಾ ಸಂಘಟನೆಗಳು, ಬೋಟ್ ಮಾಲೀಕರು, ತೈಲ ಕಂಪನಿಗಳು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮೀನುಗಾರಿಕಾ ಬೋಟುಗಳಿಗೆ ಯಾವುದೇ ರೀತಿಯಲ್ಲಿ ಡೀಸೆಲ್ ಕೊರತೆಯಾಗದಂತೆ ಸರಬರಾಜು ಮಾಡಬೇಕು ಎಂದು ತಿಳಿಸಿದ್ದಾರೆ. ಹಳೆ ಬಂದರಿನಲ್ಲಿ ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದ ಡೀಸೆಲ್ ಔಟ್‌ಲೆಟ್ ಮತ್ತೆ ತೆರೆಯಬೇಕು ಎಂದು ನಿರ್ದೇಶನ ನೀಡಿದ್ದಾರೆ. ಮಧ್ಯಪ್ರಾಚ್ಯ ಬಿಕ್ಕಟ್ಟಿನ ನಂತರ ಮೀನುಗಾರಿಕಾ ಬೋಟ್‌ಗಳಿಗೆ ಡೀಸೆಲ್ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು, ಇದರಿಂದ ಮೀನುಗಾರಿಕಾ ಬೋಟ್‌ಗಳ ಸಂಚಾರಕ್ಕೆ ಸಮಸ್ಯೆಯಾಗಿದೆ. ಮೀನುಗಾರಿಕೆ ಸಮಸ್ಯೆ ಎದುರಿಸುತ್ತಿದೆ ಎಂದು ಮೀನುಗಾರ ಮುಖಂಡರು ಸಭೆಯಲ್ಲಿ ಗಮನ ಸೆಳೆದರು.

************

ರಾಜ್ಯದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಉಪಚುನಾವಣೆ ಘೋಷಣೆಯಾಗಿದ್ದು, ಏಪ್ರಿಲ್ ೯ರಂದು ಮತದಾನ ನಡೆಯಲಿದೆ. ಮೇ ೪ರಂದು ಮತಎಣಿಕೆ ನಡೆಯಲಿದೆ. ಎರಡು ವಿಧಾನಸಭಾ ಕ್ಷೇತ್ರಗಳ ಸಮಗ್ರ ಚಿತ್ರಣ ಒದಗಿಸುವ ಮತಕ್ಷೇತ್ರ ದರ್ಶನದ ಮಾಹಿತಿಯನ್ನು ಬೆಂಗಳೂರು ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗ ಪ್ರಸ್ತುತ ಪಡಿಸುತ್ತಿದೆ.

ಈಗ ದಾವಣಗೆರೆ ದಕ್ಷಿಣ ಮತ ಕ್ಷೇತ್ರ ದರ್ಶನ

ದಾವಣಗೆರೆ ಎಂದಾಕ್ಷಣ ನೆನಪಿಗೆ ಬರುವುದು ಬಾಯಲ್ಲಿ ನೀರೂರಿಸುವ ಬೆಣ್ಣೆದೋಸೆ. ಪೂರ್ವದಲ್ಲಿ ಚಿತ್ರದುರ್ಗ, ಉತ್ತರದಲ್ಲಿ ಬಳ್ಳಾರಿ, ಪಶ್ಚಿಮದಲ್ಲಿ ಹಾವೇರಿ ಮತ್ತು ದಕ್ಷಿಣದಲ್ಲಿ ಶಿವಮೊಗ್ಗ ಜಿಲ್ಲೆಗಳ ಗಡಿಯೊಂದಿಗೆ ಬೆಸೆದುಕೊಳ್ಳುವ ಮಧ್ಯ ಕರ್ನಾಟಕ ದಾವಣಗೆರೆ ಮಲೆನಾಡು, ಅರೆಮಲೆನಾಡು, ಬಯಲುಸೀಮೆ ಹೀಗೆ ಮೂರು ರೀತಿಯ ಹವಾ ಗುಣಧರ್ಮ ಹಾಗೂ ವಿಭಿನ್ನ ಸಂಸ್ಕೃತಿ, ಆಚಾರ, ವಿಚಾರಗಳನ್ನು ಒಳಗೊಂಡ ಸಂಗಮ ಕ್ಷೇತ್ರವಾಗಿದೆ. ರಾಜಕೀಯವಾಗಿಯೂ ಜಿಲ್ಲೆ ಬಹಳ ಪ್ರಸಿದ್ಧಿ ಪಡೆದಿದೆ. ೨೦೦೮ ರಲ್ಲಿ ಆದ ಕ್ಷೇತ್ರಗಳ ಪುನರ್ ವಿಂಗಡಣೆಯಿಂದಾಗಿ ಸೃಜಿಸಿದ ಈ ಕ್ಷೇತ್ರದಲ್ಲಿ ೨೦೦೮ ರಿಂದ ೨೦೨೩ ವರೆಗೆ ನಡೆದ ೪ ಚುನಾವಣೆಗಳಲ್ಲಿ ಕಾಂಗ್ರೆಸ್ ನ ಶಾನಮನೂರು ಶಿವಶಂಕರಪ್ಪ ಅವರೇ ಗೆಲುವು ಸಾಧಿಸಿದ್ದರು. ಇದೀಗ ಅವರ ನಿಧನದಂದ ತೆರವಾಗಿರುವ ಕ್ಷೇತ್ರದ ಉಪ ಚುನಾವಣೆ ಕಾಂಗ್ರೆಸ್ ಮತ್ತು ಬಿಜೆಪಿಗೆ ಪ್ರತಿಷ್ಠೆಯ ಕಣವಾಗಿ ಮಾರ್ಪಟ್ಟಿದೆ. ಈ ಬಾರಿ ಸಮರ್ಥ್ ಶಾಮನೂರು ಕಾಂಗ್ರೆಸ್ ನಿಂದ ಹಾಗೂ ಬಿಜೆಪಿಯಿಂದ ಶ್ರೀನಿವಾಸ ದಾಸಕರಿಯಪ್ಪ, ಎಎಪಿಯಿಂದ ಶಿವಕುಮಾರ್ ಸೇರಿದಂತೆ ೨೫ ಮಂದಿ ಕಣದಲ್ಲಿದ್ದಾರೆ. ಕ್ಷೇತ್ರದಲ್ಲಿ ಒಟ್ಟು ೨೮೪ ಮತಗಟ್ಟೆಗಳಿದ್ದು, ಇದರಲ್ಲಿ ೨೩೪ ನಗರ ವ್ಯಾಪ್ತಿಯಲ್ಲಿದ್ದರೆ, ೫೦ ಗ್ರಾಮೀಣ ಭಾಗದಲ್ಲಿವೆ.ಕ್ಷೇತ್ರದ ಒಟ್ಟು ಮತದಾರರ ಸಂಖ್ಯೆ ೨ ಲಕ್ಷದ ೩೧ ಸಾವಿರದ ೬೮೩. ಈ ಪೈಕಿ ಪುರುಷರು ೧ ಲಕ್ಷದ ೧೩ ಸಾವಿರದ ೬೫೪. ಮಹಿಳೆಯರು ೧ ಲಕ್ಷದ ೧೭ ಸಾವಿರದ ೯೮೬ ಮಂದಿ ಇದ್ದಾರೆ. ಪುರುಷ ಮತದಾರರಿಗಿಂತ ೪ ಸಾವಿರಕ್ಕೂ ಅಧಿಕ ಮಹಿಳಾ ಮತದಾರರು ಹೆಚ್ಚಾಗಿರುವುದು ಕ್ಷೇತ್ರದ ವಿಶೇಷ. ೪೩ ತೃತೀಯ ಲಿಂಗಿಗಳು ಸೇರಿ ಒಟ್ಟು ೨ ಲಕ್ಷದ ೩೧ ಸಾವಿರದ ೬೮೩ ಮತದಾರರಿದ್ದಾರೆ. ೨ ಸಾವಿರದ ೭೭೪ ಯುವ ಮತದಾರರು, ೨ ಸಾವಿರದ ೫೧೮ ವಿಶೇಷ ಚೇತನ ಮತದಾರರಿದ್ದಾರೆ. ೮೫ ವರ್ಷಗಳಿಗಿಂತ ಹೆಚ್ಚು ವಯೋಮಾನದ ೯೨೮ ಪುರುಷರು, ೧,೧೩೮ ಮಹಿಳೆಯರು ಸೇರಿ ಒಟ್ಟು ೨,೦೬೬ ಮತದಾರರಿದ್ದಾರೆ, ಇವರುಗಳಿಗೆ ಮನೆಯಿಂದಲೇ ಅಂಚೆ ಮತದಾನ ಮಾಡಲು ವ್ಯವಸ್ಥೆ ಕಲ್ಪಿಸಲಾಗಿದೆ. ಕ್ಷೇತ್ರದ ಉಪಚುನಾವಣೆಯನ್ನು ಶಾಂತಿಯುತ ಹಾಗೂ ಪಾರದರ್ಶಕವಾಗಿ ನಡೆಸಲು ಜಿಲ್ಲಾ ಪೊಲೀಸ್ ಇಲಾಖೆ

ಸರ್ವಸನ್ನದ್ಧವಾಗಿದ್ದು, ಕ್ಷೇತ್ರದಲ್ಲಿ ಬಿಗಿ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ. ಇಲಾಖೆಯು ಮೂರು ಹಂತದ ಭದ್ರತಾ ಯೋಜನೆಯನ್ನು ರೂಪಿಸಿದೆ. ಚುನಾವಣೆ ಪೂರ್ವ, ಮತದಾನದ ದಿನ ಹಾಗೂ ಮತದಾನದ ನಂತರದ ಭದ್ರತೆಗಾಗಿ ಪ್ರತ್ಯೇಕ ಕಾರ್ಯತಂತ್ರಗಳನ್ನು ರೂಪಿಸಲಾಗಿದೆ.ಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಸಿಬ್ಬಂದಿ ಹಾಗೂ ವಿಶೇಷ ನಿಗಾ ವಹಿಸಲು ಕ್ರಮ ಕೈಗೊಳ್ಳಲಾಗಿದೆ. "ಚುನಾವಣಾ ಅಕ್ರಮಗಳನ್ನು ತಡೆಯಲು ಈಗಾಗಲೇ ಫ್ಲೈಯಿಂಗ್ ಸ್ಕ್ವಾಡ್, ಸ್ಟ್ಯಾಟಿಕ್ ಸರ್ವೆಲೆನ್ಸ್ ಟೀಮ್ ಹಾಗೂ ವಿಡಿಯೋ ಸರ್ವೆಲೆನ್ಸ್ ಟೀಮ್‌ಗಳನ್ನು ನಿಯೋಜಿಸಲಾಗಿದೆ. ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ೧೨ ಚೆಕ್ ಪೋಸ್ಟ್ ಗಳನ್ನು ನಿರ್ಮಿಸಲಾಗಿದ್ದು, ಅಕ್ರಮ ಹಣ ಸಾಗಾಟ ಹಾಗೂ ಮತದಾರರಿಗೆ ಹಂಚಲು ತಂದಿರುವ ಉಡುಗೊರೆಗಳ ಮೇಲೆ ಕಟ್ಟು ನಿಟ್ಟಿನ ನಿಗಾ ಇರಿಸಲಾಗಿದೆ. ಏಪ್ರಿಲ್ ೯ ರಂದು ನಡೆಯುವ ಮತದಾನಕ್ಕಾಗಿ ೨೮೪ ಮತಗಟ್ಟೆಗಳನ್ನು ಸಜ್ಜುಗೊಳಿಸಲಾಗಿದೆ. ಮತದಾನದ ಪ್ರಮಾಣ ಹೆಚ್ಚಿಸಲು ಮತ್ತು ಮತದಾರರನ್ನು ಸೆಳೆಯಲು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಹತ್ತು ವಿಶೇಷ ಮಾದರಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.ಮಹಿಳಾ ಮತದಾರರು ಹೆಚ್ಚಿರುವ ಐದು ಪ್ರದೇಶಗಳನ್ನು ಗುರುತಿಸಿ 'ಸಖಿ' ಮತಗಟ್ಟೆಗಳನ್ನಾಗಿ ಮಾಡಲಾಗಿದೆ. ಯುವ ಮತದಾರರನ್ನು ಪ್ರೋತ್ಸಾಹಿಸಲು ಎರಡು 'ಯುವ ಮತಗಟ್ಟೆ'ಗಳನ್ನು ಸ್ಥಾಪಿಸಲಾಗಿದೆ. ಈ ಮತಗಟ್ಟೆಗಳಲ್ಲಿ ೧೮ ರಿಂದ ೨೧ ವರ್ಷದೊಳಗಿನ ಯುವ ಸಿಬ್ಬಂದಿಯೇ ಕರ್ತವ್ಯ ನಿರ್ವಹಿಸುವುದು ವಿಶೇಷ. ವಿಶೇಷ ಚೇತನರಿಗಾಗಿ ಒಂದು ಪ್ರತ್ಯೇಕ ಮತಗಟ್ಟೆಯನ್ನು ಮೀಸಲಿಡಲಾಗಿದೆ. ಇಲ್ಲಿನ ನಿರ್ವಹಣಾ ಸಿಬ್ಬಂದಿ ಕೂಡ ವಿಶೇಷ ಚೇತನರೇ ಆಗಿರುವುದು ವಿಶೇಷವಾಗಿದೆ.

******END******